ಇ) ಮದರಸಾಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ವೇತನಕ್ಕಾಗಿ ರಾಜ್ಯ ಸರ್ಕಾರವು ಜಿಲ್ಲಾ ಪಂಚಾಯತ್ ಲೆಕ್ಕ ಶೀರ್ಷಿಕೆಯಡಿ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ.

ಕೇಂದ್ರ ಸರ್ಕಾರವು ಅರೇಬಿಕ್/ಮದರಾಸಗಳನ್ನು ಆಧುನೀಕರಿಸಿ ಈ ಶಾಲೆಗಳಲ್ಲಿ ಆಧುನಿಕ ವಿಷಯಗಳಾದ ಆಂಗ್ಲ, ಸಮಾಜ, ವಿಜ್ಞಾನ, ಗಣಿತ ಬೋಧಿಸಲು ಶಿಕ್ಷಕರುಗಳ ವೇತನಕ್ಕಾಗಿ ಮಾಸಿಕ ಸಂಚಿತ ವೇತನ ರೂ. 3000/–ಗಳಂತೆ 12 ತಿಂಗಳ ವೇತನವನ್ನು ಬಿಡುಗಡೆ ಮಾಡಲಾಗಿರುತ್ತದೆ. 2006–07ನೇ ಸಾಲಿಗೆ 77.41 ಲಕ್ಷಗಳನ್ನು ಈ ಉದ್ದೇಶಕ್ಕಾಗಿ ಬಿಡುಗಡೆ ಮಾಡಿದ್ದು, ಅವುಗಳಲ್ಲಿ 53.20 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

ಇದನ್ನು ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿ ಬಿಡುಗಡೆಯಾದ ಅನುದಾನವು ಯಾವ ಉದ್ದೇಶಕ್ಕೆ ಬಿಡುಗಡೆಯಾಗಿರುತ್ತದೆಯೋ ಅದೇ ಉದ್ದೇಶಕ್ಕೆ ಉಪಯೋಗಿಸಿಕೊಂಡು ಬಳಕೆ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆ.

ಬಿಡುಗಡೆಯಾದ ಅನುದಾನವನ್ನು ಅರೇಬಿಕ್ ಶಾಲಾ ಶಿಕ್ಷಕರ ವೇತನಕ್ಕಾಗಿ ನಿಗದಿಪಡಿಸಲಾಗಿದೆ.

ಈ) ಹೌದು.

ಉ) ಉದ್ಭವಿಸುವುದಿಲ್ಲ.

1082 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಯನ್ನು ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಭಾಲ್ಕಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳ ಅವಧಿಯಲ್ಲಿ ಪ್ರತಿ ವರ್ಷ ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿ ವಿದ್ಯಾರ್ಥಿಗೆ ಬಂದಿರುವ ಮತ್ತು ಬರಬೇಕಾಗಿರುವ ವಿದ್ಯಾರ್ಥಿ ವೇತನದ ಮೊತ್ತವೆಷ್ಟು; (ವಿದ್ಯಾರ್ಥಿವಾರು ವಿವರಗಳನ್ನು ಅಂಕಿ ಅಂಶಗಳಲ್ಲಿ ಒದಗಿಸುವುದು)

ಆ) ವಿದ್ಯಾರ್ಥಿ ವೇತನದ ಮೊತ್ತವನ್ನು ವಿದ್ಯಾರ್ಥಿಗಳಿಗೆ ನೀಡಲಾಗಿದೆಯೇ; ಹಾಗಿದ್ದಲ್ಲಿ 3 ವರ್ಷಗಳ ವಿವರಗಳನ್ನು ಒದಗಿಸುವುದು

ಇ) ಫೀ ಮರುಪಾವತಿ / ವಿದ್ಯಾರ್ಥಿ ವೇತನವನ್ನು ನೀಡದೆ ಇರಲು ಕಾರಣಗಳೇನು;

ಈ) ಈ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಡ ಮತ್ತು ಪ್ರತಿಭಾವಂತ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನವಿಲ್ಲದೇ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಸರ್ಕಾರ ಈ ವಿದ್ಯಾರ್ಥಿಗಳಿಗೆ ವೇತನವನ್ನು ದೊರಕಿಸಿ ಕೊಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು? ವಿದ್ಯಾರ್ಥಿ ವೇತನವನ್ನು ಸಕಾಲಕ್ಕೆ ಪಾವತಿ ಮಾಡದೇ ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು)

ಅ) ಬಾಲ್ಕಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳಲ್ಲಿ ಬಂದಿರುವ ಮತ್ತು ಬರಬೇಕಾಗಿರುವ ವಿದ್ಯಾರ್ಥಿವೇತನ ವಿವರಗಳು ಈ ಕೆಳಕಂಡಂತಿವೆ.

ಕ್ರ. ಸಂ.	ವಿದ್ಯಾರ್ಥಿ ಹೆಸರು	2006–07	2007–08	2008–09
1	ನಾವೀದ ಬಸವರಾಜ	1900		–
2	ಶಿಲಾನಿ ಶ್ಯಾಮರಾವ	–	–	1900
3	ಮೋನಿಕಾ ಶ್ರೀಮಂತರಾವ	–	–	1900
4	ಸುಧಾ ಶ್ರೀಮಂತರಾವ	–	–	1900
5	ಸಂಗೀತಾ ಸೂರ್ಯಕಾಂತ	–	–	1900
6	ಭಾಗ್ಯಶ್ರೀ ಗೋವಿಂದರಾವ	–	–	1900
7	ಅವಿನಾಶ ಗಂಗಾರಾಮ	–	–	5000

ಷರಾ: 2007–08ನೇ ಸಾಲಿನಲ್ಲಿ ವಿದ್ಯಾರ್ಥಿ ವೇತನಕ್ಕೆ ಈ ಕಾಲೇಜಿನಿಂದ ಅರ್ಜಿ ಹಾಕಿರುವುದಿಲ್ಲ.

ಆ) ಮೇಲ್ಕಂಡಂತೆ ನೀಡಲಾಗಿದೆ.

ಇ) ನಿಗದಿಪಡಿಸಿದ ಆಯವ್ಯಯವು ಬೇಡಿಕೆಗಿಂತ ಕಡಿಮೆ ಇರುವುದರಿಂದ ಶುಲ್ಕ ಮರುಪಾವತಿ ಪೂರ್ಣವಾಗಿ ಪಾವತಿ ಮಾಡಿರುವುದಿಲ್ಲ.

ಈ) ವಿದ್ಯಾರ್ಥಿ ವೇತನವನ್ನು ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಮಂಜೂರು ಮಾಡಲಾಗುತ್ತಿದೆ.

ಉ) ಶುಲ್ಕ ಮರುಪಾವತಿ ಬಾಕಿ ಇರುವ ವಿಷಯವು ಪರಿಶೀಲನೆಯಲ್ಲಿದೆ.

1192 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) (ಎಂಎಲ್ಎ) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಯನ್ನು ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಎರಡು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ವಕ್ಫ್ ಮಂಡಳಿಗೆ ಅನುದಾನವನ್ನು ಕೋರಿ ಬಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು);

ಆ) ಈ ಪ್ರಸ್ತಾವನೆಗಳ ಪೈಕಿ ಎಷ್ಟೆಷ್ಟು ಪ್ರಸ್ತಾವನೆಗಳನ್ನು ಅನುಮೋದನೆ ಮಾಡಲಾಗಿದೆ ಹಾಗೂ ಈ ಜಿಲ್ಲೆಗೆ ವಿಶೇಷವಾಗಿ ಭಾಲ್ಕಿ ವಿಧಾನಸಭಾ ಕ್ಷೇತ್ರಕ್ಕೆ ವಕ್ಫ್ ಮಂಡಳಿಯಿಂದ ಬಿಡುಗಡೆಯಾಗಿರುವ ಹಣವೆಷ್ಟು (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು);

ಇ) ಈ ಅನುದಾನದಿಂದ ಜಿಲ್ಲೆಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳ ವಿವರಗಳೇನು (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು);

ಈ) ಬೀದರ್ ಜಿಲ್ಲೆಯಲ್ಲಿ ಇನ್ನೂ ಎಷ್ಟು ಪ್ರಸ್ತಾವನೆಗಳು ಬಾಕಿ ಇವೆ, ಇವುಗಳಿಗೆ ಯಾವಾಗ ಅನುಮೋದನೆ ನೀಡಲಾಗುವುದು?

ಪ್ರೊ. ಡಾ: ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) 2007–08 ಮತ್ತು 2008–09ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಿಂದ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಅನುದಾನ ಕೋರಿ ಬಂದಿರುವ ಪ್ರಸ್ತಾವನೆಗಳು 99 ಆಗಿರುತ್ತವೆ.

ವಿಧಾನ ಸಭೆ ಕ್ಷೇತ್ರವಾರು ವಿವರವು ಈ ಕೆಳಗಿನಂತಿದೆ.

ಬೀದರ್	–	28
ಬಸವಕಲ್ಯಾಣ	–	23
ಹುಮ್ನಾಬಾದ್	–	40